# ಜಯದೇವ ಆಸ್ಪತ್ರೆ ಇನ್ನೊಂದು ಶಾಖೆ ತೆರೆಯಲ್ಲ

## ■ ಮೂರು ವರ್ಷದಲ್ಲಿ ಕಲಬುರಗಿಯಲ್ಲಿ ಸ್ವಂತ ಕಟ್ಟಡ ■ ಮುಖ್ಯಮಂತ್ರಿಗಳಿಂದ ಅಡಿಗಲ್ಲು

ಕಲಬುರಗಿ: ರಾಜ್ಯದಲ್ಲಿ ಜಯದೇವ ಹೃದ್ರೋಗ ಆಸ್ಪತ್ರೆಯ ಇನ್ನೊಂದು ಶಾಖೆ ತೆರೆಯುವ ಪ್ರಸ್ತಾವ ಹಾಗೂ ಯೋಜನೆ ಸಂಸ್ಥೆಯ ಮುಂದಿಲ್ಲ ಎಂದು ಬೆಂಗಳೂರಿನ ಶ್ರೀ ಜಯದೇವ ಹೃದ್ರೋಗ ಮತ್ತು ಸಂಶೋಧನಾ ಸಂಸ್ಥೆ ನಿರ್ದೇಶಕ ಡಾ| ಸಿ.ಎಸ್. ಮಂಜುನಾಥ ತಿಳಿಸಿದರು.

150 ಕೋಟಿ ವೆಚ್ಚದಲ್ಲಿ ನಿರ್ಮಾಣವಾಗಲಿರುವ ಆಸ್ಪತ್ರೆ ಕಟ್ಟಡ ನಿರ್ಮಾಣದ ಸ್ಥಳ ವೀಕ್ಷಿಸಿದ ನಂತರ ಜಯದೇವ ಆಸ್ಪತ್ರೆಯಲ್ಲಿ ಕರೆಯಲಾದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈಗಾಗಲೇ ಬೆಂಗಳೂರು, ಮೈಸೂರು ಹಾಗೂ ಕಲಬುರಗಿಯಲ್ಲಿ ಜಯದೇವ ಹೃದ್ರೋಗ ಆಸ್ಪತ್ರೆ ಕಾರ್ಯ ನಿರ್ವಹಿಸುತ್ತಿವೆ. ಅವುಗಳ ವೈದ್ಯಕೀಯ ಸೇವೆಯನ್ನು ಮತ್ತಷ್ಟು ಬಲವರ್ಧನೆಯೊಂದಿಗೆ ಮುನ್ನಡೆಸಲಾಗುವುದು. ಹೀಗಾಗಿ ಹೊಸ ಆಸ್ಪತ್ರೆ ಸ್ಥಾಪನೆಗೆ ಮುಂದಾಗುವುದಿಲ್ಲ. ರಾಜ್ಯವಲ್ಲದೇ ಹೊರ ರಾಜ್ಯದಲ್ಲೂ ಜಯದೇವ ಆಸ್ಪತ್ರೆ ಶಾಖೆ ತೆರೆಯಬೇಕೆಂಬ ಬೇಡಿಕೆಗಳು ಬರುತ್ತಿವೆ. ಆದರೆ ಎಲ್ಲೂ ಸ್ಥಾಪನೆಗೆ ಮುಂದಾಗುವುದಿಲ್ಲ. ಬೆಂಗಳೂರು ಆಸ್ಪತ್ರೆಯಲ್ಲಿ ದಿನಾಲು 1700 ಜನರಿಗೆ ಹೃದ್ರೋಗ ಸಂಬಂಧ ಪರೀಕ್ಷೆ ಕೈಗೊಂಡರೇ ಮೈಸೂರಲ್ಲಿ 600 ಹಾಗೂ ಕಲಬುರಗಿ ಆಸ್ಪತ್ರೆಯಲ್ಲಿ 400 ಜನರು ಆಸ್ಪತ್ರೆ ಸೇವೆ ಪಡೆಯುತ್ತಿದ್ದಾರೆ ಎಂದರು.

ಮೂರು ವರ್ಷದೊಳಗೆ ಜಯದೇವ ಹೃದ್ರೋಗ ಆಸ್ಪತ್ರೆಯು ಕಲಬುರಗಿಯಲ್ಲಿ ಸುಸಜ್ಜಿತ ಸ್ವಂತ ಕಟ್ಟಡದೊಳಗೆ ಕಾರ್ಯಾರಂಭ ಆಗಲಿದೆ. 150 ಕೋಟಿ ವೆಚ್ಚದಲ್ಲಿ 300 ಹಾಸಿಗೆಯುಳ್ಳ ಸುಸಜ್ಜಿತ ಆಸ್ಪತ್ರೆಗೆ ಸಚಿವ ಸಂಪುಟ ಒಪ್ಪಿಗೆ ನೀಡಿದೆ. ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ 150 ಕೋಟಿ ರೂ. ನೆರವಿನಿಂದ ನಗರದ ಮುಖ್ಯ ರಸ್ತೆಯ ಆರೋಗ್ಯ ಕುಟುಂಬ ಕಲ್ಯಾಣಾಧಿಕಾರಿ ಕಚೇರಿಯ ಆವರಣದ ವಿಶಾಲವಾದ ಏಳು ಎಕರೆ ಜಾಗದಲ್ಲಿ ಎಲ್ಲ ಅತ್ಯಾಧುನಿಕ ಸೌಲಭ್ಯಗಳೊಂದಿಗೆ ಜಯದೇವ ಆಸ್ಪತ್ರೆ ತಲೆ ಎತ್ತಲಿದೆ. ಈಗ ಕಾರ್ಯನಿರ್ವಹಿಸುತ್ತಿರುವ ಜಾಗ ಕಲಬುರಗಿ ಜಿಲ್ಲಾಸ್ಪತ್ರೆಗೆ ಸೇರಿದ್ದು, ಇಕ್ಕಟ್ಟಾಗಿದೆ. ಸ್ವಂತ ಕಟ್ಟಡವಾದಲ್ಲಿ ಮತ್ತಷ್ಟು ಸೇವೆ ವಿಸ್ತಾರವಾಗಲಿದೆ ಎಂದರು. ಕಲಬುರಗಿಯಲ್ಲಿ ಜಯದೇವ ಆಸ್ಪತ್ರೆಗೆ ರೋಗಿಗಳ ಸಂಖ್ಯೆ ಹೆಚ್ಚುತ್ತಿದೆ. ದಿನನಿತ್ಯ 350ರಿಂದ 400 ರೋಗಿಗಳನ್ನು ಪರೀಕ್ಷಿಸಲಾಗುತ್ತಿದೆ. ಆರಂಭದಿಂದ ಮೂರುವರೆ ವರ್ಷದಲ್ಲಿ ಎರಡು ಲಕ್ಷ ಜನರು ಹೊರ ರೋಗಿಗಳಾಗಿ ಹೃದ್ರೋಗ ಪರೀಕ್ಷೆಯ ವೈದ್ಯಕೀಯ ಸೇವೆ ಪಡೆದಿದ್ದಾರೆ. 16351 ಒಳರೋಗಿಗಳಿಗೆ ಹೃದ್ರೋಗ ಚಿಕಿತ್ಸೆ ನೀಡಿದರೆ, 411 ರೋಗಿಗಳಿಗೆ ತೆರೆದ ಹೃದಯ ಶಸ್ತ್ರಚಿಕಿತ್ಸೆ ನೀಡಲಾಗಿದೆ ಎಂದರು. ಕಲಬುರಗಿ ದಕ್ಷಿಣ ಮತಕ್ಷೇತ್ರದ ಶಾಸಕ ದತ್ತಾತ್ರೇಯ ಪಾಟೀಲ ರೇವೂರ ಮಾತನಾಡಿ, ಬರುವ ಫೆಬ್ರುವರಿಯಲ್ಲಿ ಸಿಎಂ ಯಡಿಯೂರಪ್ಪ ಕಟ್ಟಡ ನಿರ್ಮಾಣಕ್ಕೆ ಅಡಿಗಲ್ಲು ನೆರವೇರಿಸಲಿದ್ದಾರೆ ಎಂದರು.

ಇದೇ ವೇಳೆ ಆಸ್ಪತ್ರೆಯ ನೂತನ ಕಟ್ಟಡದ ನೀಲಿ ನಕ್ಷೆಯನ್ನು ಡಾ| ಸಿ.ಎಸ್. ಮಂಜುನಾಥ, ಶಾಸಕ ದತ್ತಾತ್ರೇಯ ಪಾಟೀಲ ರೇವೂರ ಬಿಡುಗಡೆಗೊಳಿಸಿದರು. ಡಾ| ಬಾಬುರಾವ್ ಹುಡಗೀಕರ, ಕಾರ್ಡಿಯೋಲಾಜಿ ಮುಖ್ಯಸ್ಥ ಡಾ| ವೀರೇಶ ಪಾಟೀಲ, ಸಂಸ್ಥೆಯ ಮುಖ್ಯ ಆಡಳಿತಾಧಿಕಾರಿ ಚಿಕ್ಕತಿಮ್ಮಯ್ಯ, ಸಾರ್ವಜನಿಕ ಸಂಪರ್ಕಾಧಿಕಾರಿ ಸಂತೋಷ ಕೆಂಗಲಹಳ್ಳಿ, ಎಚ್‌ಕೆಸಿಸಿಐ ಅಧ್ಯಕ್ಷ ಅಮರನಾಥ ಪಾಟೀಲ, ಶರಣು ಪಪ್ಪಾ ಹಾಗೂ ಇತರರು ಇದ್ದರು.



ಕಲಬುರಗಿ: ನಗರದಲ್ಲಿ ನಿರ್ಮಾಣವಾಗುತ್ತಿರುವ ಜಯದೇವ ಹೃದ್ರೋಗ ಆಸ್ಪತ್ರೆಯ ಸುಸಜ್ಜಿತ ಕಟ್ಟಡದ ಸ್ಥಳವನ್ನು ಬೆಂಗಳೂರಿನ ಶ್ರೀ ಜಯದೇವ ಹೃದ್ರೋಗ ಮತ್ತು ಸಂಶೋಧನಾ ಸಂಸ್ಥೆ ನಿರ್ದೇಶಕ ಡಾ| ಸಿ.ಎಸ್. ಮಂಜುನಾಥ ವೀಕ್ಷಿಸಿದರು. ಶಾಸಕ ದತ್ತಾತ್ರೇಯ ಪಾಟೀಲ ರೇವೂರ ಇದ್ದರು.

> ಜಯದೇವ ಹೃದ್ರೋಗ ಸಂಸ್ಥೆ ಕಲಬುರಗಿಯಲ್ಲಿ ಆರಂಭವಾದಾಗಿನಿಂದಲೂ ಸ್ವಂತ ಕಟ್ಟಡ ಹೊಂದಲು ಪ್ರಯತ್ನಿಸಲಾಗಿತ್ತು. ಇದೀಗ 150 ಕೋಟಿ ರೂ. ವೆಚ್ಚದಲ್ಲಿ ಆಸ್ಪತ್ರೆ ನಿರ್ಮಾಣಕ್ಕೆ ರಾಜ್ಯ ಸರ್ಕಾರ ಹಸಿರು ನಿಶಾನೆ ನೀಡಿದ್ದು, ಬರುವ ಫೆಬ್ರವರಿಯಲ್ಲಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರಿಂದ ಶಂಕುಸ್ಥಾಪನೆ ನೆರವೇರಿಸಲಾಗುವುದು. ವಿಮಾನಯಾನ ಸೇವೆಯಲ್ಲಿ ಕಲಬುರಗಿ ಸೇರ್ಪಡೆ ಆಗಿರುವುದರಿಂದ ತುರ್ತು ಸಂದರ್ಭದಲ್ಲಿ ವೈದ್ಯರು ಬೆಂಗಳೂರಿನಿಂದ ಕಲಬುರಗಿಗೆ ಬಂದು ಚಿಕಿತ್ಸೆ ನೀಡಲು ಅವಕಾಶ ದೊರೆತಿದೆ.
>
> ● ದತ್ತಾತ್ರೇಯ ಪಾಟೀಲ ರೇವೂರ, ಶಾಸಕ, ಕಲಬುರಗಿ ದಕ್ಷಿಣ

## ದಾನ ನೀಡಿದವರ ಹೆಸರಲ್ಲಿ ವಾರ್ಡ್

ಕಲಬುರಗಿ: ನಗರದಲ್ಲಿ ನಿರ್ಮಾಣಗೊಳ್ಳಲಿರುವ ಜಯದೇವ ಹೃದ್ರೋಗ ಸುಸಜ್ಜಿತ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕಟ್ಟಡ ನಿರ್ಮಾಣಕ್ಕೆ ದಾನ ನೀಡಿದರೆ ಆಸ್ಪತ್ರೆ ವಾರ್ಡ್‌ವೊಂದಕ್ಕೆ, ಇಲ್ಲವೇ ವಿಭಾಗಕ್ಕೆ ಅವರ ಹೆಸರನ್ನು ಇಡಲಾಗುವುದು ಎಂದು ಶ್ರೀ ಜಯದೇವ ಹೃದ್ರೋಗ ಮತ್ತು ಸಂಶೋಧನಾ ಸಂಸ್ಥೆ ನಿರ್ದೇಶಕ ಡಾ| ಸಿ.ಎಸ್. ಮಂಜುನಾಥ ತಿಳಿಸಿದರು.

ಹೈದ್ರಾಬಾದ್ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯಲ್ಲಿ ಸಂಸ್ಥೆ ವತಿಯಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಬೆಂಗಳೂರಿನಲ್ಲಿ ಆಸ್ಪತ್ರೆ ಕಟ್ಟಡ ನಿರ್ಮಾಣಕ್ಕೆ 2 ಕೋಟಿ ರೂ. ದೇಣಿಗೆ ನೀಡಿದ್ದರ ಹಿನ್ನೆಲೆಯಲ್ಲಿ ಅವರ ಹೆಸರು ವಾರ್ಡ್‌ವೊಂದಕ್ಕೆ ಇಡಲಾಗಿದೆ. ಅದೇ ರೀತಿ ಸಭಾಂಗಣ ಇಲ್ಲವೇ ಇತರ ವಿಭಾಗಕ್ಕೂ ಹೆಸರಿಡಲಾಗುವುದು. ಯಾರಾದರೂ ದಾನಿಗಳಿದ್ದರೆ ಜಯದೇವ ಸಂಸ್ಥೆಗೆ ಸಹಾಯ ಮಾಡಿ ಸಮಾಜ ಕಾರ್ಯಕ್ಕೆ ಕೈ ಜೋಡಿಸಬಹುದು ಎಂದರು.



ಕಲಬುರಗಿ: ಎಚ್‌ಕೆಸಿಸಿಐ ಅಧ್ಯಕ್ಷ ಅಮರನಾಥ ಪಾಟೀಲ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. ಡಾ| ಸಿ.ಎಸ್. ಮಂಜುನಾಥ ಇದ್ದರು.

ಜಯದೇವ ಆಸ್ಪತ್ರೆಗೆ ಸ್ವಂತ ಕಟ್ಟಡವಾಗುವಲ್ಲಿ ಎಚ್‌ಕೆಸಿಸಿಐ ಸಂಸ್ಥೆ ಮೊದಲ ಬಾರಿಗೆ ಒತ್ತಾಯಿಸಿದೆ. ತದನಂತರ ಈ ಭಾಗದ ಜನಪ್ರತಿನಿಧಿಗಳು ಸರ್ಕಾರದ ಮೇಲೆ ಒತ್ತಡ ಹಾಕಿದ್ದರಿಂದ ಸ್ಥಳ ಹಾಗೂ ಸೂಕ್ತ ಅನುದಾನ ಸಿಗುವಂತಾಗಿದೆ ಎಂದರು.

ಎಚ್‌ಕೆಸಿಸಿಐ ಅಧ್ಯಕ್ಷ ಅಮರನಾಥ ಪಾಟೀಲ ಮಾತನಾಡಿ, ಡಾ| ಸಿ.ಎಸ್. ಮಂಜುನಾಥ ಸರಳ ವ್ಯಕ್ತಿತ್ವ ಹೊಂದಿದ್ದು, ಮನವಿಯನ್ನು ಕಾರ್ಯರೂಪಕ್ಕೆ ತರುವ ಮುಖಾಂತರ ತಮ್ಮ ಸ್ಪಂದಿಸಿದ್ದಾರೆ ಎಂದು ಶ್ಲಾಘಿಸಿದರು.

ಎಚ್‌ಕೆಸಿಸಿಐ ಗೌರವ ಕಾರ್ಯದರ್ಶಿ ಶಶಿಕಾಂತ ಪಾಟೀಲ, ಉಪಾಧ್ಯಕ್ಷ ಶರಣು ಪಪ್ಪಾ ಹಾಗೂ ಪದಾಧಿಕಾರಿಗಳು ಇದ್ದರು.


VelYou Products
ಮಧು
ಚೆಂ
AMRITH NONI
ನೋನಿ ಹ
ನಿಯಂತ್ರ
ಮೂತ್ರ ಪಿ


Scanned by CamScanner